# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು–572 103

ಆದೇಶ ಸಂಖ್ಯೆ: ತುವಿ:ಅವಿ:2024-25/ 2230 ದಿನಾಂಕ:26.09.2024

## "ಸುತ್ತೋಲೆ"

ವಿಷಯ:ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಹಾಸ್ಟೆಲ್ /ವಸತಿ ಸೌಲಭ್ಯ ಒದಗಿಸುತ್ತಿರುವ ಕುರಿತು.

ಉಲ್ಲೇಖ:1. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತುಮಕೂರು ಇವರ ಪತ್ರ ಸಂಖ್ಯೆ :ಬಿಸಿಎಂ- 3/ವನಿಶಾ/ವಿನಿಪ್ರವೇಶ/ಸಿ ಆರ್–12/2024-25 ದಿನಾಂಕ:09.09.2024.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:19.09.2024 (ಕಂಡಿಕೆ–97)

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದಲ್ಲಿ ತುಮಕೂರು ಜಿಲ್ಲೆಯನ್ನು ಒಳಗೊಂಡಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯು ಆಯಾ ವರ್ಷಕ್ಕೆ ಸೀಮಿತವಾಗಿದ್ದು, 2023–24ನೇ ಸಾಲಿನ ಪ್ರವೇಶ ಪ್ರಕ್ರಿಯೆಯು ಈಗಾಗಲೇ ಮುಕ್ತಾಯಗೊಂಡಿದ್ದು, 2024–25 ನೇ ಸಾಲಿಗೆ ಅನ್ವಯಿಸುವಂತೆ ಪ್ರಸ್ತುತ ಪದವಿ ಕೋರ್ಸ್‌ಗಳ ಪ್ರವೇಶ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ತದನಂತರದಲ್ಲಿ ಆಹ್ವಾನಿಸಲಾಗುವ ಸ್ನಾತಕ/ಸ್ನಾತಕೊತ್ತರ ಕೋರ್ಸುಗಳಿಗೆ ಇಲಾಖಾ ವಿದ್ಯಾರ್ಥಿನಿಲಯಗಳ ಪ್ರವೇಶ ನಿಯಮಗಳನ್ವಯ ನಿಯಮಾನುಸಾರ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿರುತ್ತದೆ ಎಂದು ತಿಳಿಸಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಸ್ಟೆಲ್/ವಸತಿ ಸೌಲಭ್ಯ ಪಡೆದುಕೊಳ್ಳುವಂತೆ ಅಗತ್ಯ ಕ್ರಮವಹಿಸುವಂತೆ ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

ಅಡಕ:ಉಲ್ಲೇಖಿತ ದಿನಾಂಕ:09.09.2024ರ ಪತ್ರ

ಆದೇಶದ ಮೇರೆಗೆ,

ಉಪಕುಲಸಚಿವರು

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಹಾಗೂ ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ಘಟಕ ಕಾಲೇಜುಗಳು, ಹಾಗೂ ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಂಯೋಜಕರು, ಹಿಂದುಳಿದ ವರ್ಗಗಳ ಕೋಶ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ನಿಲಯಪಾಲಕರು, ಸ್ನಾತಕ ಪದವಿ ಪುರುಷ&ಮಹಿಳಾ ವಿದ್ಯಾರ್ಥಿನಿಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಸದರಿ ಸುತ್ತೋಲೆಯನ್ನು ಸಂಬಂಧಿಸಿದವರಿಗೆ ಇ–ಮೇಲ್ ಮುಖಾಂತರ ಕಳುಹಿಸುವುದು ಮತ್ತು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
2. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಕಚೇರಿ ಪ್ರತಿ.

NHD24

ಕರ್ನಾಟಕ ಸರ್ಕಾರ
ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ತುಮಕೂರು
ಕ್ಯಾತ್ಸಂದ್ರ, ಮೈದಾಳ ರಸ್ತೆ, ಬಸವಪಟ್ಟಣ, ತುಮಕೂರು-572104

E-mail- dobcmtumkur@gmail.com ☎ 0816-2278014

ಸಂಖ್ಯೆ:ಬಿಸಿಎಂ-3/ವನಿಶಾ/ವಿನಿ ಪ್ರವೇಶ/ಸಿಆರ್-12/2024-25 ದಿನಾಂಕ: 04/09/2024

ರವರಿಗೆ,

ಕುಲ ಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು.

ಮಾನ್ಯರೆ,

ವಿಷಯ:- ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಹಾಸ್ಟೆಲ್ / ವಸತಿ ಸೌಲಭ್ಯ ಒದಗಿಸುವ ಕುರಿತು.

ಉಲ್ಲೇಖ:- 1. ತಮ್ಮ ಪತ್ರ ಸಂ: ತುವಿ.ಅ.ವಿ:2023-24 ದಿನಾಂಕ:05/12/2023
2. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರ ಪತ್ರ ಸಂ: ಮಿಸ್. ಸಿಆರ್.605/2023-24 ದಿ:27/06/2024

******

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರಲ್ಲಿ ತುಮಕೂರು ವಿಶ್ವವಿದ್ಯಾನಿಲಯದಲ್ಲಿ 2023-24ನೇ ಸಾಲಿನಿಂದ ಹಲವಾರು ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಿದ್ದು, ಸ್ನಾತಕ ಹಾಗೂ ಸ್ನಾತಕೋತ್ತರ ವಿಭಾಗಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಲಯಗಳು ಈಗಾಗಲೇ ಪೂರ್ಣಗೊಂಡಿದ್ದು, ಗ್ರಾಮೀಣ ಪ್ರದೇಶದ ಇನ್ನು ಹಲವು ವಿದ್ಯಾರ್ಥಿಗಳಿಗೆ ವಸತಿ ವ್ಯವಸ್ಥೆ ಕಲ್ಪಿಸಲು ತುಮಕೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಸತಿ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದು ವಿದ್ಯಾರ್ಥಿಗಳ ಪಟ್ಟಿಯೊಂದಿಗೆ ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರಿಗೆ ಮನವಿ ಸಲ್ಲಿಸಲಾಗಿರುತ್ತದೆ.

ಅದರಂತೆ, ಉಲ್ಲೇಖ (2) ರಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರು ಸದರಿ ಮನವಿ ಪತ್ರದಲ್ಲಿನ ಅಂಶಗಳ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಹಾಗೂ ಅರ್ಜಿದಾರರಿಗೆ ಮಾಹಿತಿ/ ಹಿಂಬರಹ ನೀಡುವಂತೆ ಸೂಚಿಸಿರುತ್ತಾರೆ.

ಸದರಿ ಮನವಿಯನ್ನು ಪರಿಶೀಲಿಸಲಾಗಿದ್ದು, ತುಮಕೂರು ಜಿಲ್ಲೆಯನ್ನು ಒಳಗೊಂಡಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆಯು ಆಯಾ ವರ್ಷಕ್ಕೆ ಸೀಮಿತವಾಗಿದ್ದು, 2023-24ನೇ ಸಾಲಿನ ಪ್ರವೇಶ ಪ್ರಕ್ರಿಯೆಯು ಈಗಾಗಲೇ ಮುಕ್ತಾಯಗೊಂಡಿದ್ದು, 2024-25ನೇ ಸಾಲಿಗೆ ಅನ್ವಯಿಸುವಂತೆ ಪ್ರಸ್ತುತ ಪದವಿ ಕೋರ್ಸುಗಳ ಪ್ರವೇಶ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ತದನಂತರದಲ್ಲಿ ಆಹ್ವಾನಿಸಲಾಗುವ ಸ್ನಾತಕ/ ಸ್ನಾತಕೋತ್ತರ ಕೋರ್ಸುಗಳಿಗೆ ಇಲಾಖಾ ವಿದ್ಯಾರ್ಥಿನಿಲಯಗಳ ಪ್ರವೇಶ ನಿಯಮಗಳನ್ವಯ ನಿಯಮಾನುಸಾರ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿರುತ್ತದೆ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಿದೆ.

ತಮ್ಮ ವಿಶ್ವಾಸಿ

ಜಿಲ್ಲಾ ಅಧಿಕಾರಿಗಳು
ಹಿಂದುಳಿದ ವರ್ಗಗಳ ಕಲ್ಯಾಣ
ಇಲಾಖೆ, ತುಮಕೂರು ಜಿಲ್ಲೆ.

ಪ್ರತಿಯನ್ನು:-

1. ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.

168964/2024

E-48202/2024

**ಜಿಲ್ಲಾಧಿಕಾರಿಯವರ ಕಾರ್ಯಾಲಯ, ತುಮಕೂರು ಜಿಲ್ಲೆ, ತುಮಕೂರು**

ದೂರವಾಣಿ:0816-2272480 ಇ-ಮೇಲ್:deo.tumkur@gmail.com

ಸಂಖ್ಯೆ: ಮಿಸ್.ಸಿಆರ್:605/2023-24
E-321416

ದಿನಾಂಕ:-27-06-2024.

ಗೆ,

1) ಜಂಟಿ ನಿರ್ದೇಶಕರು,
ಸಮಾಜ ಕಲಾಣ ಇಲಾಖೆ,
ತುಮಕೂರು.

2) ಜಿಲ್ಲಾ ಅಧಿಕಾರಿಗಳು,
ಹಿಂದುಳಿದ ವರ್ಗಗಳ ಇಲಾಖೆ,
ತುಮಕೂರು.

ಮಾನ್ಯರೇ,

ವಿಷಯ:- ಸರ್ಕಾರದಿಂದ, ಸಾರ್ವಜನಿಕರಿಂದ ಸ್ವೀಕೃತವಾಗಿರುವ ಮನವಿಗಳ ಕುರಿತು.

ಮೇಲಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಸಾರ್ವಜನಿಕರಿಂದ ಸ್ವೀಕೃತವಾದ ಮೂಲ ಪ್ರತಿ ಮತ್ತು ಅದರ ಅಡಕಗಳನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಮನವಿ ಅಂಶಗಳ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಅರ್ಜಿದಾರರಿಗೆ ಸೂಕ್ತ ಮಾಹಿತಿ/ಹಿಂಬರಹ ನೀಡುವಂತೆ ಕೋರಿದೆ.

| ಕ್ರ.ಸ. | ಗಣಕ ಸಂಖ್ಯೆ | ಅರ್ಜಿದಾರರ ವಿಳಾಸ | ವಿಷಯ |
|---|---|---|---|
| 1) | ಇ-715370 | ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. | ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್ ವಸತಿ ಸೌಲಭ್ಯ ಒದಗಿಸಲು ಕೋರಿರುವ ಬಗ್ಗೆ. |

(ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿ
ಟಿಪ್ಪಣಿ ಆದೇಶದ ಮೇರೆಗೆ)

ನಿಮ್ಮ ವಿಶ್ವಾಸಿ,

Signed by
ಕಛೇರಿ ಸಹಾಯಕರು,
ಜಿಲ್ಲಾಧಿಕಾರಿಗಳ ಕಛೇರಿ,
ತುಮಕೂರು.

Mohankumar G V

Date: 12-07-2024 12:51:28

ಜಿಲ್ಲಾ ಬಿ.ಸಿ.ಎಂ. ಅಧಿಕಾರಿಗಳ ಕಾರ್ಯಾಲಯ, ತುಮಕೂರು.
ದಿನಾಂಕ: 30/07/2024
ಸಂಕಲನ: ....................
ಗಣಕ ಸಂಖ್ಯೆ: ....................
ವ್ಯವಸ್ಥಾಪಕರು. ಜೆ.ಎಂ. ಡಿ.ಒ.